# ಕುವೆಂಪು ವಿಶ್ವವಿದ್ಯಾಲಯ

ಸಂಖ್ಯೆ:ಕುವಿ/ಪವಿ/ D 7173 /2018-19

ರಿಜಿಸ್ಟ್ರಾರ್ (ಮೌಲ್ಯಮಾಪನ)ರವರ ಕಛೇರಿ
ಜ್ಞಾನಸಹ್ಯಾದ್ರಿ
ಶಂಕರಘಟ್ಟ – 577451
ದಿನಾಂಕ: 04-12-2018

ಗೆ,
ಪ್ರೊ. ಕೆ.ಎನ್. ಚಂದ್ರಶೇಖರಪ್ಪ
ನಿರ್ದೇಶಕರು,
ದೂರಶಿಕ್ಷಣ ನಿರ್ದೇಶನಾಲಯ,
ಕುವೆಂಪು ವಿಶ್ವವಿದ್ಯಾಲಯ,
ಶಂಕರಘಟ್ಟ.

ಮಾನ್ಯರೆ,

ವಿಷಯ : ವಿಶ್ವವಿದ್ಯಾಲಯದ ದೂರಶಿಕ್ಷಣದ 2018ರ ಎಲ್ಲಾ ಕೋರ್ಸ್‌ಗಳ ಪ್ರಾಯೋಗಿಕ ಪರೀಕ್ಷೆಗಳ ಹಾಗೂ ಆಂತರಿಕ ಅಂಕಗಳನ್ನು ವೆಬ್‌ಸೈಟ್‌ಗೆ ಅಪ್‌ಲೋಡ್ ಮಾಡುವ ಕುರಿತು.
ಉಲ್ಲೇಖ : ತಮ್ಮ ಪತ್ರ ಸಂಖ್ಯೆ:ಕುವಿ/ದೂಶಿನಿ-4/2018-19/2501, ದಿ.24-11-18

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಪತ್ರವನ್ನು ಪರಿಶೀಲಿಸಲಾಗಿ, ಈಗಾಗಲೇ ಈ ಕಛೇರಿಯ ಸುತ್ತೋಲೆ ಸಂಖ್ಯೆ:ಕುವಿ/ಪವಿ/ಡಿ7031/2018-19, ದಿ03/04-12-2018 ರಲ್ಲಿ (ಪ್ರತಿ ಲಗತ್ತಿಸಿದೆ) ವಿಶ್ವವಿದ್ಯಾಲಯದ ದೂರಶಿಕ್ಷಣದ 2018ರ ಎಲ್ಲಾ ಕೋರ್ಸ್‌ಗಳ ಪ್ರಾಯೋಗಿಕ ಪರೀಕ್ಷೆಗಳ ಹಾಗೂ ಆಂತರಿಕ ಅಂಕಗಳನ್ನು ವೆಬ್‌ಸೈಟ್‌ಗೆ ಅಪ್‌ಲೋಡ್ ಮಾಡುವ ಕುರಿತು ವಿವರವಾದ ಮಾಹಿತಿಯನ್ನು ನೀಡಲಾಗಿದೆ. ಈ ಹಿಂದಿನ ವರ್ಷದ ಆಂತರಿಕ/ಪ್ರಾಯೋಗಿಕ ಅಂಕಗಳನ್ನು ವೆಬ್‌ಸೈಟ್‌ಗೆ ಅಪ್‌ಲೋಡ್ ಮಾಡುವ ಕಾರ್ಯವು ತುಂಬಾ ವಿಳಂಬವಾಗಿ ವಿದ್ಯಾರ್ಥಿಗಳ ಫಲಿತಾಂಶ ಪ್ರಕಟಣೆಯಲ್ಲಿ ಅಡಚಣೆಯಾಗಿರುತ್ತದೆ. ಆದ್ದರಿಂದ ಈ ಬಾರಿ ಆ ರೀತಿಯಾಗದಂತೆ ಎಚ್ಚರ ವಹಿಸಲು ಸಂಬಂಧಪಟ್ಟವರಿಗೆ ತಿಳಿಸಲು ಈ ಮೂಲಕ ಕೋರಲಾಗಿದೆ.

ತಮ್ಮ ವಿಶ್ವಾಸಿ,

7/12/18

ಕುಲಸಚಿವರು (ಪರೀಕ್ಷಾಂಗ)

ಕುಲಸಚಿವ (ಪರೀಕ್ಷಾಂಗ)
ಕುವೆಂಪು ವಿಶ್ವವಿದ್ಯಾನಿಲಯ
ಜ್ಞಾನಸಹ್ಯಾದ್ರಿ, ಶಂಕರಘಟ್ಟ-577 451
ಶಿವಮೊಗ್ಗ ಜಿಲ್ಲೆ, ಕರ್ನಾಟಕ.

ಕುವೆಂಪು ವಿಶ್ವವಿದ್ಯಾನಿಲಯ
ದೂರ ಶಿಕ್ಷಣ ನಿರ್ದೇಶನಾಲಯ
11 DEC 2018
2977
ಶಂಕರಘಟ್ಟ-577451
ನಂ..............

# ಕುವೆಂಪು ವಿಶ್ವವಿದ್ಯಾಲಯ

ಸಂಖ್ಯೆ:ಕುವಿ/ಪವಿ/D7031 /2018-19

ರಿಜಿಸ್ಟ್ರಾರ್ (ಮೌಲ್ಯಮಾಪನ)ರವರ ಕಛೇರಿ
ಜ್ಞಾನಸಹ್ಯಾದ್ರಿ
ಶಂಕರಘಟ್ಟ – 577451

ದಿನಾಂಕ: 03-12-2018 (4)

## ಸುತ್ತೋಲೆ

ವಿಷಯ : ವಿಶ್ವವಿದ್ಯಾಲಯದ ದೂರಶಿಕ್ಷಣದ 2018ರ ಎಲ್ಲಾ ಕೋರ್ಸ್‌ಗಳ ಪ್ರಾಯೋಗಿಕ ಪರೀಕ್ಷೆಗಳ ಹಾಗೂ ಆಂತರಿಕ ಅಂಕಗಳನ್ನು ವೆಬ್‌ಸೈಟ್‌ಗೆ ಅಪ್‌ಲೋಡ್ ಮಾಡುವ ಕುರಿತು.

******

2017–18ರ ದೂರಶಿಕ್ಷಣದ ಎಲ್ಲಾ ಕೋರ್ಸ್‌ಗಳ ಪ್ರಾಯೋಗಿಕ ಪರೀಕ್ಷೆಗಳ ಅಂಕ ಮತ್ತು ಆಂತರಿಕ (I.A.) ಅಂಕಗಳನ್ನು ದಿನಾಂಕ: **05–12–2018 ರಿಂದ 20–12–2018** ರೊಳಗೆ ವಿಶ್ವವಿದ್ಯಾಲಯದ ವೆಬ್‌ಸೈಟ್‌ಗೆ ಕಡ್ಡಾಯವಾಗಿ ಸೇರ್ಪಡೆ (ಅಪ್‌ಲೋಡ್) ಮಾಡಬೇಕೆಂದು ಈ ಮೂಲಕ ತಿಳಿಸಲಾಗಿದೆ.

ಸೂಚನೆ:

1. ಪ್ರಾಯೋಗಿಕ ಮತ್ತು ಆಂತರಿಕ (I.A.) ಅಂಕಗಳನ್ನು ವೆಬ್‌ಸೈಟ್‌ಗೆ 2013ರಿಂದ ಜಾರಿಯಲ್ಲಿರುವ ನಿಯಮದ ಪ್ರಕಾರವೇ oasis.logisys.org/kusdde ನಲ್ಲಿ ಲಾಗಿನ್ ಆಗಿ ನಮೂದಿಸಬೇಕು. ಪ್ರಾಯೋಗಿಕ ಅಂಕಗಳನ್ನು Practical Marks option ನಲ್ಲಿ ಸೇರ್ಪಡೆ ಮಾಡಬೇಕು ಮತ್ತು ಆಂತರಿಕ ಅಂಕಗಳನ್ನು Before Exam – I.A. Marks – I.A. Marks Entry option ನಲ್ಲಿ ಸೇರ್ಪಡೆ ಮಾಡಬೇಕು.
2. ವಿಶ್ವವಿದ್ಯಾಲಯದ ನಿಯಮಾವಳಿಗಳ ಪ್ರಕಾರ ಲಿಖಿತ ಪರೀಕ್ಷೆಗಿಂತ ಮುಂಚಿತವಾಗಿ ಪ್ರಾಯೋಗಿಕ ಮತ್ತು ಆಂತರಿಕ ಅಂಕಗಳು ದಾಖಲಾಗಬೇಕಾಗಿರುತ್ತದೆ. ಈ ಹಿನ್ನೆಲೆಯಲ್ಲಿ ಎಲ್ಲಾ ಅಧ್ಯಯನ ಕೇಂದ್ರಗಳ ಕೋ–ಆರ್ಡಿನೇಟರ್‌ಗಳು ಈ ಕುರಿತು ಸೂಕ್ತ ಕ್ರಮಕೈಗೊಳ್ಳುವುದು.
3. ಎಲ್ಲಾ ವಿದ್ಯಾರ್ಥಿಗಳ ಅಂಕಗಳನ್ನು upload ಮಾಡಿದ ನಂತರ ಪರಿಶೀಲಿಸಿ freeze ಮಾಡಬೇಕು. ವಿದ್ಯಾರ್ಥಿಗಳು ಗೈರು ಹಾಜರಾಗಿದ್ದಲ್ಲಿ ಅಂತಹ ಪ್ರಕರಣಗಳನ್ನು ತಪ್ಪದೇ Absent ಎಂದು ನಮೂದಿಸತಕ್ಕದ್ದು. ಯಾವುದೇ ಕಾರಣಕ್ಕೂ ಖಾಲಿ ಬಿಡತಕ್ಕದ್ದಲ್ಲ. ನಂತರ ಯಾವುದೇ ಬದಲಾವಣೆಗೆ ಅವಕಾಶವಿರುವುದಿಲ್ಲ ಹಾಗಾಗಿ ಎಲ್ಲಾ ವಿದ್ಯಾರ್ಥಿಗಳ ಅಂಕಗಳನ್ನು upload ಮಾಡಿರುವ ಬಗ್ಗೆ ಪರಿಶೀಲಿಸಿ ಖಾತ್ರಿ ಮಾಡಿಕೊಳ್ಳತಕ್ಕದ್ದು. ವಿದ್ಯಾರ್ಥಿಗಳ ಹೆಸರು ಬಿಟ್ಟು ಹೋಗಿದ್ದಲ್ಲಿ ಅಥವಾ ಬದಲಾವಣೆ ಏನಾದರೂ ಇದ್ದಲ್ಲಿ ಕೊನೆಯ ದಿನಾಂಕದೊಳಗಾಗಿ ಪರೀಕ್ಷಾ ವಿಭಾಗವನ್ನು ಸಂಪರ್ಕಿಸುವುದು. **ನಂತರದಲ್ಲಿ ಯಾವುದೇ ವಿದ್ಯಾರ್ಥಿಗಳ ವಿಷಯದ ಮುಂದೆ ಖಾಲಿ ಇದ್ದಲ್ಲಿ/ಅಂಕ ನಮೂದಿಸದೆ ಇದ್ದಲ್ಲಿ ಗೈರು ಹಾಜರಿ ಎಂದು ನಮೂದಿಸಿ ಫಲಿತಾಂಶ ಪ್ರಕಟಿಸಲಾಗುವುದು.**
4. ಎಲ್ಲಾ ವಿದ್ಯಾರ್ಥಿಗಳ ಅಂಕಗಳನ್ನು upload ಮಾಡಿದ ನಂತರ ಪ್ರಾಯೋಗಿಕ ಪರೀಕ್ಷೆಯ (ಐ.ಎ. ಹೊರತುಪಡಿಸಿ) ಅಂಕಗಳ ಮೂಲ ಪ್ರತಿಗಳನ್ನು ಉತ್ತರ ಪತ್ರಿಕೆಗಳೊಂದಿಗೆ ಅಂದರೆ B.Sc, M.Sc, M.L.I.Sc, B.L.I.Sc ಪ್ರತ್ಯೇಕವಾಗಿ ಬಂಡಲ್ ಮಾಡಿ ದಿನಾಂಕ:30–12–2018 ರೊಳಗಾಗಿ ಕುಲಸಚಿವ(ಪರೀಕ್ಷಾಂಗ)ರವರಿಗೆ ಕಡ್ಡಾಯವಾಗಿ ಕಳುಹಿಸಿಕೊಡುವುದು.
5. ನಿಗದಿತ ದಿನಾಂಕದೊಳಗೆ upload ಮಾಡದಿರುವ ಹಾಗೂ ಹಾರ್ಡ್ ಕಾಪಿಯಲ್ಲಿ ಸಲ್ಲಿಸುವ ಅಂಕಗಳನ್ನು ಯಾವುದೇ ಕಾರಣಕ್ಕೂ ಪರಿಗಣಿಸಲಾಗುವುದಿಲ್ಲವೆಂದು ತಿಳಿಸಲಾಗಿದೆ. ಒಂದು ವೇಳೆ ಅಂತಹ ಪ್ರಕರಣಗಳು ಉಂಟಾದಲ್ಲಿ ವಿಶ್ವವಿದ್ಯಾಲಯವು ಜವಾಬ್ದಾರಿಯಾಗಿರುವುದಿಲ್ಲ, ಇದರಿಂದ ಉಂಟಾಗುವ ತೊಂದರೆಗಳಿಗೆ ತಾವೇ ನೇರ ಹೊಣೆಗಾರರಾಗಿರುತ್ತೀರಿ ಎಂಬುದನ್ನು ಸ್ಪಷ್ಟಪಡಿಸಲಾಗಿದೆ.
6. Upload ಮಾಡುವ ಸಂದರ್ಭದಲ್ಲಿ ಯಾವುದೇ ತಾಂತ್ರಿಕ ತೊಂದರೆಗಳು ಉಂಟಾದಲ್ಲಿ logisys.helpdesk@gmail.com email ಮೂಲಕ ತಿಳಿಸುವುದು.

3/12/18

ಕುಲಸಚಿವರು (ಪರೀಕ್ಷಾಂಗ)

ಕುಲಸಚಿವ (ಪರೀಕ್ಷಾಂಗ)
ಕುವೆಂಪು ವಿಶ್ವವಿದ್ಯಾನಿಲಯ
ಜ್ಞಾನಸಹ್ಯಾದ್ರಿ, ಶಂಕರಘಟ್ಟ-577 451
ಶಿವಮೊಗ್ಗ ಜಿಲ್ಲೆ, ಕರ್ನಾಟಕ

3/12/18

ಗೆ,

1. ನಿರ್ದೇಶಕರು, ದೂರಶಿಕ್ಷಣ ನಿರ್ದೇಶನಾಲಯ, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ.
2. ಎಲ್ಲಾ ಅಧ್ಯಯನ ಕೇಂದ್ರಗಳ ಕೋ–ಆರ್ಡಿನೇಟರ್‌ಗಳಿಗೆ

ಪ್ರತಿ:

1. ಮಾನ್ಯಕುಲಪತಿಗಳ ಆಪ್ತ ಸಹಾಯಕರು, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ – ಮಾಹಿತಿಗಾಗಿ
2. ಉಪಕುಲಸಚಿವರು/ಸಹಾಯಕ ಕುಲಸಚಿವರು, ದೂರಶಿಕ್ಷಣ ನಿರ್ದೇಶನಾಲಯ, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ – ಮಾಹಿತಿಗಾಗಿ
3. ಕಛೇರಿ ಪ್ರತಿ.